ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಜಿಲ್ಲಾ ಪಂಚಾಯಿತಿ ಕಟ್ಟಡ, ಜ್ಯೋತಿ ನಗರ, ಚಿಕ್ಕಮಗಳೂರು-577102

E-mail- dobcmchikkamagalore@gmail.com ☎ /Fax 08262-220922

ಸಂಖ್ಯೆ: ಹಿಂವಇ/ನೇಮಕಾತಿ/ಸಿಆರ್-37/2016-2017 ದಿನಾಂಕ: 24.07.2017

# -ಃ ಅಧಿಸೂಚನೆ ಃ-

ಸರ್ಕಾರದ ಆದೇಶ ಸಂಖ್ಯೆ: ಹಿಂವಕ/336/ಬಿಇಟಿ 2015 ದಿನಾಂಕ: 05.11.2015 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಹಿಂವಕ90/ಬಿಇಟಿ2016 (ಭಾಗ-2) ದಿನಾಂಕ: 29.09.2016 ರನ್ವಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಗ್ರೂಪ್ ಡಿ ವೃಂದದ 62 ಅಡುಗೆಯವರ ಹುದ್ದೆಗಳಿಗೆ ಹಾಗೂ 92 ಅಡುಗೆ ಸಹಾಯಕರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಈ ಇಲಾಖೆಯ ಅಧಿಸೂಚನೆ ಸಂಖ್ಯೆ: ಹಿಂವಇ/ನೇಮಕಾತಿ/ಸಿಆರ್37/2016-17 ದಿನಾಂಕ: 20.10.2016 ರಡಿ ಅಧಿಸೂಚನೆ ಹೊರಡಿಸಲಾಗಿತ್ತು. ಅದರಂತೆ, ದಿನಾಂಕ: 21.07.2017 ಸಂಜೆ 5.30 ರೊಳಗೆ ಆಕ್ಷೇಪಣೆ ಸಲ್ಲಿಸಲು ತಿಳಿಸಲಾಗಿತ್ತು. ಅಡುಗೆಯವರ ಹುದ್ದೆಗೆ ಯಾವುದೇ ಆಕ್ಷೇಪಣೆಗಳು ಇಲ್ಲದ್ದರಿಂದ ಅಡುಗೆಯವರ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ ಹಾಗೂ ಕಾಯ್ದಿರಿಸಿರುವ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಈ ಕೆಳಗಿನಂತೆ ಪ್ರಕಟಿಸಲಾಗಿದೆ.

ಅಡುಗೆ ಸಹಾಯಕರ ಹುದ್ದೆಗೆ ಸಂಬಂಧಿಸಿದ ಸರ್ಕಾರಿ ಆದೇಶ ಸಂಖ್ಯೆ: ಹಿಂವಕ90/ ಬಿಇಟಿ 2016(ಭಾಗ-2) ಬೆಂಗಳೂರು ದಿನಾಂಕ: 06.07.2017 ರಂತೆ ಅಡುಗೆಯವರು / ಅಡುಗೆ ಸಹಾಯಕರ ಎರಡು ಹುದ್ದೆಗಳಲ್ಲಿ ಹೆಚ್ಚಿನ ವೇತನ ಶ್ರೇಣಿಯ ಹುದ್ದೆಗೆ ಆಯ್ಕೆ ಮಾಡಿ ಒಂದು ಹುದ್ದೆಗೆ ಮಾತ್ರ ಪರಿಗಣಿಸಿ ಆಯ್ಕೆ ಪಟ್ಟಿ ಹೊರಡಿಸಲು ತಿಳಿಸಿರುವುದರಿಂದ ಅಡುಗೆಯವರು ಹಗೂ ಅಡುಗೆ ಸಹಾಯಕರ ಹುದ್ದೆಗೆ 17 ಸಂಖ್ಯೆಯ ಒಂದೇ ಅಭ್ಯರ್ಥಿಗಳು ಆಯ್ಕೆಯಾಗಿದ್ದು ಇವರನ್ನು ಹೆಚ್ಚಿನ ವೇತನ ಶ್ರೇಣಿಯ ಅಡುಗೆಯವರ ಹುದ್ದೆಗೆ ಪರಿಗಣಿಸಲಾಗಿದೆ. ಇದರಿಂದ ಖಾಲಿಯಾಗುವ 17 ಸ್ಥಾನಗಳಿಗೆ ಅಡುಗೆ ತಯಾರಿಕಾ ಪ್ರಾಯೋಗಿಕ ಪರೀಕ್ಷೆಯಲ್ಲಿ ಅರ್ಹರಾಗಿರುವ ಅಡುಗೆ ಸಹಾಯಕರ ಪಟ್ಟಿಯಿಂದ (1:3 ಪಟ್ಟಿಯಿಂದ) ಎಸ್.ಎಸ್.ಎಲ್.ಸಿ. ಪರೀಕ್ಷೆಯ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತಾತ್ಕಾಲಿಕ ಪಟ್ಟಿ ಹಾಗೂ ಕಾಯ್ದಿರಿಸಿದ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಅಡುಗೆ ಸಹಾಯಕರ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ, ಆಕ್ಷೇಪಣೆಗಳಿದ್ದಲ್ಲಿ ಅಭ್ಯರ್ಥಿಗಳು ಈ ಕೆಳಕಂಡ ವಿಳಾಸಕ್ಕೆ ಲಿಖಿತ ಹೇಳಿಕೆ ಮೂಲಕ ಸೂಕ್ತ ದಾಖಲೆಗಳೊಂದಿಗೆ **ದಿನಾಂಕ: 31.07.2017 ಸಂಜೆ 5.30** ಗಂಟೆಯೊಳಗೆ ಆಕ್ಷೇಪಣೆ ಸಲ್ಲಿಸಬಹುದಾಗಿರುತ್ತದೆ. ನಂತರ ಸಲ್ಲಿಸಿದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**ವಿಳಾಸ: ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,**

**ಜಿಲ್ಲಾ ಪಂಚಾಯಿತಿ ಕಟ್ಟಡ, ಜ್ಯೋತಿ ನಗರ, ಚಿಕ್ಕಮಗಳೂರು**

ನೇಮಕಾತಿ ಪ್ರಾಧಿಕಾರ: ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಚಿಕ್ಕಮಗಳೂರು

ಜಿಲ್ಲಾ ಅಧಿಕಾರಿ,
ಹಾಗೂ ಸದಸ್ಯ ಕಾರ್ಯದರ್ಶಿ,
ಜಿಲ್ಲಾ ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ
ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ
ಅಡುಗೆಯವರು/ಅಡುಗೆ ಸಹಾಯಕರ ಹುದ್ದೆಗಳ
ನೇರ ನೇಮಕಾತಿ ಸಮಿತಿ
ಚಿಕ್ಕಮಗಳೂರು ಜಿಲ್ಲೆ.